ಅ) ರಾಜ್ಯದಲ್ಲಿ ಸರ್ಕಾರದಿಂದ ಮಾನ್ಯತೆ ಪಡೆದು ಅನುದಾನವಿಲ್ಲದೆ ನಡೆಯುತ್ತಿರುವ ಖಾಸಗಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು?

ಆ) ಅನೇಕ ಖಾಸಗಿ ಶಾಲೆಗಳಲ್ಲಿ ಶಿಕ್ಷಕರುಗಳಿಗೆ ಸರಿಯಾಗಿ ವೇತನವನ್ನು ಕೊಡದೆ ಇರುವುದರಿಂದ, ಶಿಕ್ಷಕರುಗಳು ಸರಿಯಾಗಿ ಹಾಜರಾಗದೆ ಶಿಕ್ಷಣದ ಗುಣಮಟ್ಟ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಸದರಿ ಶಾಲೆ: ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ವಿಷಯ ಸರ್ಕಾರದವರ ಪರಿಶೀಲನೆಯಲ್ಲಿದೆಯೇ?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಪ್ರೌಢಶಾಲೆಗಳು - 2498

ಪದವಿ ಪೂರ್ವ ಕಾಲೇಜುಗಳು - 697

ಆ) ಇಲ್ಲ

ಇ) ಉದ್ಭವಿಸುವುದಿಲ್ಲ

**ಧಾರವಾಡ ನಗರದಲ್ಲಿ ಮಾದರಿ ಪ್ರೌಢಶಾಲೆ ಪ್ರಾರಂಭಿಸುವುದು**

364 - ಶ್ರೀ ಚಂದ್ರಕಾಂತ ಬೆಲ್ಲದ (ಧಾರವಾಡ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಧಾರವಾಡ ನಗರದಲ್ಲಿ ಮಾದರಿ ವಸತಿ ಪ್ರೌಢಶಾಲೆ ಪ್ರಾರಂಭಿಸುವ ವಿಷಯ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ ಎಂದು ಪ್ರಾರಂಭಿಸಲಾಗುವುದು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

**ಧಾರವಾಡ ನಗರದಲ್ಲಿ ಪ್ರಾಥಮಿಕ ಶಾಲೆಗಳನ್ನು ಹೆಚ್ಚಿಸುವುದು**

567 - ಶ್ರೀ ಚಂದ್ರಕಾಂತ ಬೆಲ್ಲದ (ಧಾರವಾಡ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ರಾಜ್ಯದಲ್ಲಿನ ಬೆಂಗಳೂರು ನಗರದ ನಂತರ, ಧಾರವಾಡ ನಗರ ಶೈಕ್ಷಣಿಕ ನಗರವೆಂದು ಹೆಸರು ಗಳಿಸಿರುವುದು ನಿಜವೇ?

ಆ) ಹಾಗಿದ್ದಲ್ಲಿ, ಈ ಸದರಿ ನಗರದಲ್ಲಿ ಹೆಚ್ಚಿನ ಪ್ರಾಥಮಿಕ ಶಾಲೆಗಳ ಅವಶ್ಯಕತೆ ಬಗ್ಗೆ ಬೇಡಿಕೆ ಇರುವುದು ನಿಜವೇ;

ಇ) ಹಾಗಿದ್ದಲ್ಲಿ, ಹಾಲಿ ಇರುವ ಪ್ರಾಥಮಿಕ ಶಾಲೆಗಳನ್ನು ಹೆಚ್ಚಿಸುವ ವಿಷಯವನ್ನು ಸರ್ಕಾರದವರು ಪರಿಶೀಲಿಸುವರೇ?

ಶ್ರೀ ಹೆಚ್.ಜಿ. ಗೋವಿಂದ ಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ನಿಜ

ಆ) ಇಲ್ಲ

ಇ) ಉದ್ಭವಿಸುವುದಿಲ್ಲ